ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 09/03/2020

# ಭಾಗ್ಯಗಳಿಗೆ ಸದ್ದಿಲ್ಲದೆ ಕತ್ತರಿ ಸದನದಲ್ಲಿ ದಳ್ಳುರಿ?

## ಸಿದ್ದು ಸರಕಾರದ ಒಂದೊಂದೇ ಯೋಜನೆಗಳಿಗೆ ಬಿಎಸ್‌ವೈ ಕಡಿವಾಣ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು 9/3/20

ಹಿಂದಿನ ಸರಕಾರದ ಯಾವುದೇ ಯೋಜನೆಗಳಿಗೆ ಕಡಿವಾಣ ಹಾಕುವುದಿಲ್ಲ ಎನ್ನುತ್ತಲೇ ಒಂದೊಂದೇ ಯೋಜನೆಗಳನ್ನು ರದ್ದುಗೊಳಿಸುತ್ತಿರುವ ಬಿಎಸ್‌ವೈ ನೇತೃತ್ವದ ಬಿಜೆಪಿ ಸರಕಾರದ ವಿರುದ್ಧ ಸದನದಲ್ಲಿ ಹೋರಾಟಕ್ಕೆ ಕಾಂಗ್ರೆಸ್ ಸಿದ್ಧತೆ ನಡೆಸಿದೆ.

ಕಾಂಗ್ರೆಸ್ ಸರಕಾರದ ಅವಧಿಯಲ್ಲಿ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಾಲದಲ್ಲಿ ಜಾರಿಗೆ ತಂದಿದ್ದ ಶಾದಿ ಭಾಗ್ಯ ಯೋಜನೆ ಕೈ ಬಿಡಲು ರಾಜ್ಯ ಸರಕಾರ ಮುಂದಾಗಿದೆ. ಈಗಾಗಲೇ, ಅನ್ನಭಾಗ್ಯ ಯೋಜನೆಯ ಅಕ್ಕಿಗೆ ಕಡಿವಾಣ ಹಾಕಿದ್ದು, ಇಂದಿರಾ ಕ್ಯಾಂಟೀನ್ ಮುಚ್ಚಲು ಮುಂದಾಗಿರುವುದು ಸೇರಿದಂತೆ ಹಿಂದಿನ ಸರಕಾರದ ಬಹುತೇಕ ಯೋಜನೆಗಳ ಮೇಲೆ ಬಿಎಸ್‌ವೈ ಸರಕಾರ ಕೆಂಗಣ್ಣು ಬೀರಿದೆ. ಇವೆಲ್ಲವನ್ನು ಸಹಿಸದ ಸೂಕ್ತ ಹೋರಾಟ ರೂಪಿಸಲು ಕಾಂಗ್ರೆಸ್ ಮುಂದಾಗಿದೆ.

ಅಲ್ಪಸಂಖ್ಯಾತರಿಗಾಗಿ ಸಿದ್ದರಾಮಯ್ಯ ಸರಕಾರ ಜಾರಿಗೆ ತಂದಿದ್ದ ಬಿದಾಯಿ ಯೋಜನೆಯಡಿ ವಿವಾಹದ ಖರ್ಚು, ಜೀವನಾವಶ್ಯಕ ಸಾಮಗ್ರಿ ಖರೀದಿಗೆ 50 ಸಾವಿರ ರು. ನೀಡಲಾಗುತ್ತಿತ್ತು. ಇದೀಗ ಆ ಯೋಜನೆಯನ್ನು ಬಿಜೆಪಿ ಸರಕಾರ ನಿಲ್ಲಿಸುವ ಚಿಂತನೆ ನಡೆಸಿದೆ. ಬಜೆಟ್‌ನಲ್ಲಿ ಶಾದಿ ಭಾಗ್ಯ ಯೋಜನೆಗೆ ಸರಕಾರ ಹಣ ಮೀಸಲಿಟ್ಟಿರಲಿಲ್ಲ. ಹೀಗಾಗಿ ಶಾದಿ ಭಾಗ್ಯ ಯೋಜನೆಗಾಗಿ ಹಿಂದಿನ ಮೈತ್ರಿ ಸರಕಾರ ಹಂಚಿಕೆ ಮಾಡಲಾದ ಹಣದಲ್ಲಿ ಉಳಿದ ಹಣವೆಷ್ಟು, ಯೋಜನೆಗಾಗಿ ಅರ್ಜಿ ಸಲ್ಲಿಸಿದ ಫಲಾನುಭವಿಗಳೆಷ್ಟು, ಅದರಲ್ಲಿ ಅರ್ಹ ಫಲಾಭುಭವಿಗಳ ಸಂಖ್ಯೆ ಎಷ್ಟು ಎಂಬುದರ ಮಾಹಿತಿ ನೀಡುವಂತೆ ಇಲಾಖೆ ಅಧಿಕಾರಿಗಳಿಗೆ ಅಲ್ಪಸಂಖ್ಯಾತ ಇಲಾಖೆ ನಿರ್ದೇಶಕರು ಪತ್ರ ಬರೆದಿದ್ದಾರೆ.

ಆ ಮೂಲಕ ಹಾಲಿ ಯೋಜನೆ ಮುಂದುವರಿಸಲು ಆರ್ಥಿಕ ಸಂಕಷ್ಟ ಎದುರಾಗಿದೆ ಎಂಬ ಸಂದೇಶ ನೀಡಿದರೂ ಅಲ್ಪಸಂಖ್ಯಾತರ ಯೋಜನೆಗೆ ಕತ್ತರಿ ಹಾಕುವ ಮೂಲಕ ಅಲ್ಪಸಂಖ್ಯಾತ ಸಮುದಾಯದ ವಿರೋಧಿ ಎಂಬ ಸಂದೇಶ ರವಾನಿಸಿದೆ. ಸರಕಾರ ಹೀಗೆಯೇ ಮಾಡಬಹುದು ಎಂಬ ಕಾರಣಕ್ಕೆ ಅಲ್ಪಸಂಖ್ಯಾತ ಸಮುದಾಯದ ಶಾಸಕರಾದ ಯು.ಟಿ.ಖಾದರ್, ಜಮೀರ್ ಅಹಮದ್ ಖಾನ್, ಎನ್.ಎ.ಹ್ಯಾರಿಸ್, ರಿಜ್ವಾನ್ ಅರ್ಷದ್, ತನ್ವೀರ್ ಸೇಠ್ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಭೇಟಿಯಾಗಿ ಶಾದಿಭಾಗ್ಯ ಯೋಜನೆ ನಿಲ್ಲಿಸದಂತೆ ಮನವಿ ಮಾಡಿದ್ದರು.

ಅಲ್ಪಸಂಖ್ಯಾತ ಶಾಸಕರ ಮನವಿ ಮೇರೆಗೆ ಯಡಿಯೂರಪ್ಪ ಅಧಿಕಾರಿಗಳ ಜತೆ ಚರ್ಚಿಸಿ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದರು. ಆದರೆ ಈ ಬೆನ್ನಲ್ಲೇ ಅಲ್ಪಸಂಖ್ಯಾತ ನಿರ್ದೇಶನಾಲಯದಿಂದ ಶಾದಿಭಾಗ್ಯಕ್ಕೆ ಹೊಸ ಅರ್ಜಿ ಸ್ವೀಕರಿಸದಂತೆ ಆದೇಶ ಹೊರಡಿಸಲಾಗಿದೆ. ಅನ್ನಭಾಗ್ಯ ಅಕ್ಕಿ ವಿತರಣೆಯಲ್ಲಿ ಹೆಚ್ಚಿನ ನಷ್ಟವಾಗುತ್ತದೆ ಎಂಬ ಕಾರಣಕ್ಕೆ ಅಕ್ಕಿ ನಿಲ್ಲಿಸಲು ತೀರ್ಮಾನ ಕೈಗೊಳ್ಳಲಾಗಿದೆ. ಆದರೆ, ಅಕ್ಕಿ ಬದಲಿಗೆ ಗೋಧಿ ನೀಡಲು ತೀರ್ಮಾನಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

**ಸದನದಲ್ಲಿ ಹೋರಾಟಕ್ಕೆ ಸಿದ್ಧತೆ:** ಅನ್ನಭಾಗ್ಯಕ್ಕೆ ಕತ್ತರಿ, ಶಾದಿ ಭಾಗ್ಯ ರದ್ದು, ಇಂದಿರಾ ಕ್ಯಾಂಟೀನ್ ಹೆಸರು ಬದಲಾವಣೆ ಅಥವಾ ಯೋಜನೆಯನ್ನೇ ರದ್ದುಗೊಳಿಸುವ ಸಂಬಂಧ ಬಿಜೆಪಿ ನಡೆಯನ್ನು ಗಂಭೀರವಾಗಿ ಪರಿಗಣಿಸಿರುವ ಕಾಂಗ್ರೆಸ್ ಇದರ ವಿರುದ್ಧ ಬಲವಾದ ಪ್ರತಿಭಟನೆ ರೂಪಿಸಲು ತೀರ್ಮಾನಿಸಿದೆ. ಈಗ ಬಜೆಟ್ ಅಧಿವೇಶನ ನಡೆಯುತ್ತಿದ್ದು, ಅಧಿವೇಶನದಲ್ಲಿಯೇ ಬಿಜೆಪಿಯ ದ್ವೇಷದ ರಾಜಕಾರಣವನ್ನು ಹಣಿಯಲು ತಂತ್ರಗಾರಿಕೆ ರೂಪಿಸುತ್ತಿದೆ. ಸಿದ್ದರಾಮಯ್ಯ ನೇತೃತ್ವದಲ್ಲಿ ಮಂಗಳವಾರ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ.

### ಮುಚ್ಚುವ ಸ್ಥಿತಿಯಲ್ಲಿ ಇಂದಿರಾ ಕ್ಯಾಂಟೀನ್

ಬಜೆಟ್‌ನಲ್ಲಿ ಬಿಎಸ್‌ವೈ ಸರಕಾರ ಸಿದ್ದರಾಮಯ್ಯ ಸರಕಾರದ ಮಹಾತ್ವಾಕಾಂಕ್ಷೆ ಯೋಜನೆ ಇಂದಿರಾ



ಕ್ಯಾಂಟೀನ್‌ಗೆ ನೀಡುವ ಅನುದಾನದ ಬಗ್ಗೆಯೂ ಎಲ್ಲೂ ಪ್ರಸ್ತಾಪ ಮಾಡಿಲ್ಲ, ಅಧಿಕಾರಕ್ಕೆ ಬರುತ್ತಿದ್ದಂತೆಯೇ ಇಂದಿರಾ ಕ್ಯಾಂಟೀನ್ ಮುಚ್ಚುವ ಮಾತುಗಳು ಕೇಳಿಬಂದಿದ್ದವು. ಆದರೆ, ಬಿಬಿಎಂಪಿಯಲ್ಲಿ ಅಧಿಕಾರದಲ್ಲಿದ್ದ ಕಾಂಗ್ರೆಸ್ ಮೇಯರ್, ಬಿಬಿಎಂಪಿಯೇ ಕ್ಯಾಂಟೀನ್‌ನ ನಿರ್ವಹಣೆ ವೆಚ್ಚ ಭರಿಸುವುದಾಗಿ ತಿಳಿಸಿ ಯೋಜನೆ ಮುಂದುವರಿಸಿದ್ದರು. ಈಗ ಬಿಬಿಎಂಪಿಯಲ್ಲಿಯೂ ಬಿಜೆಪಿ ಅಧಿಕಾರದಲ್ಲಿದ್ದು, ಇಂದಿರಾ ಕ್ಯಾಂಟೀನ್‌ನ ನಿರ್ವಹಣೆಗೆ ಹೆಚ್ಚಿನ ಆಸಕ್ತಿ ತೋರುತ್ತಿಲ್ಲ. ಬಡವರ ಹಸಿವು ನೀಗಿಸುತ್ತಿದ್ದ ಇಂದಿರಾ ಕ್ಯಾಂಟೀನ್ ಈಗ ರಾಜಕೀಯ ಪ್ರತಿಷ್ಠೆಗೆ ಬಲಿಯಾಗುತ್ತಿದ್ದು, ದಿನೇ ದಿನೆ ಖಾಲಿ ಹೊಡೆಯುತ್ತಿದೆ.

### ದಿವಾಳಿ ಸರಕಾರ: ಸಿದ್ದು

ಸರಕಾರದ ಬಳಿ ದುಡ್ಡಿಲ್ಲದ ಕಾರಣ ಅಕ್ಕಿ ಕಾಳಸಂತೆಯಲ್ಲಿ ಮಾರಾಟ ಆಗುತ್ತಿದೆ. ದುರುಪಯೋಗ ಆಗುತ್ತಿದೆ ಎಂದು ನೆಪ ಒಡ್ಡುತ್ತಿದ್ದಾರೆ. ಬಿಜೆಪಿ ಸರಕಾರ ಹಣದ ಮುಗ್ಗಟ್ಟಿನಿಂದ ನರಳುತ್ತಿದೆ. ಅವರ ಬಳಿ ದುಡ್ಡಿಲ್ಲ. ಕೇಂದ್ರ ಸರಕಾರ ಕೂಡ ಆರ್ಥಿಕ ದಿವಾಳಿಯಾಗಿದೆ. ರಾಜ್ಯಕ್ಕೆ ಕೊಡಬೇಕಾದ ಹಣ ಕೊಡ್ತಿಲ್ಲ. ಇವ್ರಿಗೆ ಪ್ರಧಾನಿ ಮೋದಿಯವರ ಬಳಿ ಹಣ ತರುವ ಧೈರ್ಯ ಇಲ್ಲ, ಶಕ್ತಿನೂ ಇಲ್ಲ. 25 ಜನ ಎಂಪಿ ಇದ್ದಾರೆ. ಕರ್ನಾಟಕಕ್ಕೆ ಅನ್ಯಾಯ ಆಗಿದೆ ಅಂತ ಒಂದು ದಿನ ಹೋಗಿ ಭೇಟಿ ಮಾಡಿ ಮನವಿ ಮಾಡಿಲ್ಲ. ರಾಜ್ಯದ ಜನರಿಗೆ ದ್ರೋಹ ಮಾಡ್ತಿದ್ದಾರೆ ಇವ್ರು. ಅಲ್ಪಸಂಖ್ಯಾತರ ಯೋಜನೆಗಳಿಗೆ ಕಲ್ಲು ಹಾಕುತ್ತಿದ್ದಾರೆ. ಈ ಬಗ್ಗೆ ಬಜೆಟ್ ಅಧಿವೇಶನದಲ್ಲಿ ಪ್ರಸ್ತಾಪ ಮಾಡುತ್ತೇನೆ ಎಂದು ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಹರಿಹಾಯ್ದಿದ್ದಾರೆ.

